All India Radio: Bangalore

National Bulletin In Kannada

03.02.2025  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಡಿಜಿಟಲ್ ಪಾವತಿ ವ್ಯವಹಾರಗಳಲ್ಲಿ ಶೇಕಡ ೪೪ ರಷ್ಟು ಪ್ರಗತಿ ಸಾಧನೆ
- ಕಳೆದ ತಿಂಗಳಾಂತ್ಯದವರೆಗೆ ೩೦ ಕೋಟಿಗೂ ಹೆಚ್ಚು ಅಸಂಘಟಿತ ಕಾರ್ಮಿಕರು ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಣಿ
- ಸಂಸತ್ತಿನ ಉಭಯ ಸದನಗಳಲ್ಲಿ ರಾಷ್ಟ್ರಪತಿ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆ ಆರಂಭ
- ೩೮ನೇ ರಾಷ್ಟ್ರೀಯ ಕ್ರೀಡಾಕೂಟ; ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಮುಡಿಗೇರಿಸಿಕೊಂಡ ಕರ್ನಾಟಕದ ಜೊನಾಥನ್ ಗವಿನ್ ಆಂಟೋನಿ

***************

ಡಿಜಿಟಲ್ ಪೇಮೆಂಟ್ ವ್ಯವಹಾರಗಳಲ್ಲಿ ಕಳೆದ ಹಣಕಾಸು ವರ್ಷದಲ್ಲಿ ಶೇಕಡ ೪೪ ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಸರ್ಕಾರ ಲೋಕಸಭೆಗಿಂದು ತಿಳಿಸಿದೆ.

ಕಳೆದ ಹಣಕಾಸು ವರ್ಷದಲ್ಲಿ ದೇಶದ ಡಿಜಿಟಲ್ ಪಾವತಿ ವಹಿವಾಟು ೧೮ ಸಾವಿರ ಕೋಟಿ ರೂಪಾಯಿಗೂ ಹೆಚ್ಚಾಗಿದೆ ಎಂದು ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಸದನಕ್ಕೆ ಉತ್ತರಿಸಿದರು.

ತಕ್ಷಣದ ಪಾವತಿ ಸೇವೆ ಮತ್ತು ರಾಷ್ಟ್ರೀಯ ಎಲೆಕ್ಟ್ರಾನಿಕ್ ಟೋಲ್ ಸಂಗ್ರಹ ಗಮನಾರ್ಹ ಬೆಳವಣಿಗೆ ಸಾಧಿಸಿದೆ. ಆದರೆ ಏಕೀಕೃತ ಪಾವತಿ ಇಂಟರ್ಫೇಸ್ ದೇಶದಲ್ಲಿ ಡಿಜಿಟಲ್ ಪಾವತಿ ವಹಿವಾಟಿನ ಪ್ರಮುಖ ಪ್ರೇರಕ ಶಕ್ತಿಯಾಗಿದೆ ಎಂದು ಹೇಳಿದರು. ರುಪೇ ಡೆಬಿಟ್ ಕಾರ್ಡ್‌ಗಳು ಮತ್ತು ಕಡಿಮೆ ಮೌಲ್ಯದ ಃಊIಒ-UPI ವಹಿವಾಟುಗಳ ಪ್ರಚಾರಕ್ಕಾಗಿ ಪ್ರೋತ್ಸಾಹಕ ಯೋಜನೆಯು ಕಳೆದ

ಹಣಕಾಸು ವರ್ಷದಲ್ಲಿ ಮೂರು ಸಾವಿರದ ೫೦೦ ಕೋಟಿ ರೂಪಾಯಿಗಳ ಆರ್ಥಿಕ ವೆಚ್ಚವನ್ನು ಹೊಂದಿದೆ ಎಂದು ಅವರು ಹೇಳಿದರು.

ಮೂರನೇ ಶ್ರೇಣಿಯ ನಗರಗಳಿಂದ ೬ನೇ ಹಂತದ ಶ್ರೇಣಿಯ ನಗರಗಳಲ್ಲಿ ಡಿಜಿಟಲ್ ಪಾವತಿ ಮೂಲಸೌಕರ್ಯ ಬೆಳೆಸಲು ಭಾರತೀಯ ರಿಸರ್ವ್ ಬ್ಯಾಂಕ್ ಕಾರ್ಯಾರಂಭ ಮಾಡಿರುವ ಪೇಮಂಟ್ ಮೂಲಸೌಕರ್ಯ ಅಭಿವೃದ್ಧಿ ನಿಧಿ ಕಳೆದ ನವೆಂಬರ್‌ವರೆಗೆ ೪.೦೮ ಕೋಟಿ ಸಂಪರ್ಕ ಕೇಂದ್ರಗಳ ನಿಯೋಜನೆಗೆ ಇದು ಕಾರಣವಾಗಿದೆ ಎಂದು ಸಚಿವರು ಉತ್ತರದಲ್ಲಿ ತಿಳಿಸಿದ್ದಾರೆ.

***************

ಕಳೆದ ತಿಂಗಳ ೨೮ ರವರೆಗೆ ೩೦.೫೮ ಕೋಟಿಗೂ ಹೆಚ್ಚು ಅಸಂಘಟಿತ ಕಾರ್ಮಿಕರು ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ. ಎಂದು ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ತಿಳಿಸಿದೆ.

ಕಳೆದ ವರ್ಷ ಜನವರಿ ೧ ರಿಂದ ಡಿಸೆಂಬರ್ ೩೧ ರವರೆಗೆ ಇ-ಶ್ರಮ್ ಪೋರ್ಟಲ್ ನಲ್ಲಿ ೧.೨೩ ಕೋಟಿಗೂ ಹೆಚ್ಚು ನೋಂದಣಿ ದಾಖಲಿಸಿದ್ದು, ದಿನಕ್ಕೆ ಸರಾಸರಿ ೩೩,ಸಾವಿರದ ೬೦೦ ನೋಂದಣಿಗಳನ್ನು ಮಾಡಲಾಗಿದೆ.

ವಿವಿಧ ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳಿಂದ ೧೨ ಯೋಜನೆಗಳನ್ನು ಪೋರ್ಟಲ್‌ನೊಂದಿಗೆ ಸಂಯೋಜಿಸಲಾಗಿದ್ದು,ಇದನ್ನು ೨೨ ಭಾರತೀಯ ಭಾಷೆಗಳಲ್ಲಿ ಪ್ರವೇಶಿಸಬಹುದಾಗಿದೆ. ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ಡೇಟಾಬೇಸ್ ರಚನೆಗಾಗಿ ಸಚಿವಾಲಯ ಆಗಸ್ಟ್ ೨೬, ೨೦೨೧ ರಂದು ಪೋರ್ಟಲ್ ಅನ್ನು ಪ್ರಾರಂಭಿಸಿತ್ತು.

***************

ಸಂಸತ್ತಿನ ಉಭಯ ಸದನಗಳಲ್ಲೂ ಇಂದು ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆ ಆರಂಭsವಾಯಿತು

ಮೊದಲಿಗೆ ಲೋಕಸಭೆಯಲ್ಲಿ ಬಿಜೆಪಿಯ ರಾಮ್‌ವೀರ್ ಸಿಂಗ್ ಬಿಧುರಿ ನಿರ್ಣಯದ ಮೇಲೆ ಚರ್ಚೆ ಆರಂಭಿಸಿ, ಜನರ ಬದುಕು ಹಸನು ಮಾಡಲು ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕೈಗೊಂಡ ಅಭಿವೃದ್ಧಿ ಕೆಲಸಗಳ ಪಟ್ಟಿ ಮಾಡಿ ಹೇಳಿದರು.

ರಾಷ್ಟ್ರ ರಾಜಧಾನಿಯಲ್ಲಿ ಆಯುಷ್ಮಾನ್ ಭಾರತ್ ಮತ್ತು ಪ್ರಧಾನ್ ಮಾತ್ರ ಆವಾಸ್ ಯೋಜನೆಯಂತಹ ವಿವಿಧ ಕೇಂದ್ರ ಯೋಜನೆಗಳನ್ನು ಜಾರಿಗೊಳಿಸದ ತರದ ದೆಹಲಿಯ ಅಪ್ ಸರ್ಕಾರದ ಕ್ರಮವನ್ನು ಟೀಕಿಸಿದರು.

ದೆಹಲಿ ಸರ್ಕಾರ ಜನರ ಮೂಲಭೂತ ಅವಶ್ಯಕತೆಗಳಾದ ಆರೋಗ್ಯ ರಕ್ಷಣೆ, ವಸತಿ ಮತ್ತು ಇತರ ಸೌಲಭ್ಯಗಳನ್ನು ನಿರಾಕರಿಸಿ ಜನವಿರೋಧಿ ಕೆಲಸದಲ್ಲಿ ನಿರತವಾಗಿದೆ. ದೆಹಲಿ ಜಲ ಮಂಡಳಿಯು ೭೫ ಸಾವಿರ ಕೋಟಿ ರೂಪಾಯಿ ನಷ್ಟವನ್ನು ಎದುರಿಸುತ್ತಿದೆ ಎಂದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಚರ್ಚೆಯಲ್ಲಿ ಭಾಗವಹಿಸಿ, ರಾಷ್ಟ್ರಪತಿಗಳ ಹೊಸ ವಿಚಾರಗಳು ಏನೂ ಇಲ್ಲ. ನಿರುದ್ಯೋಗ ಸಮಸ್ಯೆ ದೇಶದ ಯುವಕರನ್ನು ಕಾಡುತ್ತಿದೆ. ಇದರ ಬಗ್ಗೆ ಯಾವುದೇ ಪ್ರಸ್ತಾಪ ಮಾಡಿಲ್ಲ. ಉತ್ಪಾದನಾ ವಲಯದಲ್ಲಿ ಮತ್ತು ಜಿಡಿಪಿಯಲ್ಲಿ ಗಮನಾರ್ಹ ಕುಸಿತ ಕಾಣಿಸಿಕೊಂಡಿದೆ. ಕಳೆದ ೬೦ ವರ್ಷಗಳಲ್ಲೇ ಜಿಡಿಪಿ ಬೆಳವಣಿಗೆ ಕೆಳ ಮಟ್ಟಕ್ಕೆ ಇಳಿದಿದೆ. ಇದು ದೇಶದ ಆರ್ಥಿಕ ಪರಿಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದರು.

ರಾಜ್ಯಸಭೆಯಲ್ಲಿ ಬಿಜೆಪಿ ಸದಸ್ಯ ಕಿರಣ್ ಚೌಧರಿ ನಿರ್ಣಯದ ಮೇಲೆ ಮಾತನಾಡಿ, ರೈತರ ಆದಾಯ ದ್ವಿಗುಣಗೊಳಿಸಲು ನರೇಂದ್ರ ಮೋದಿ ಸರ್ಕಾರ ಹಲವು ಕ್ರಮ ಕೈಗೊಂಡಿದೆ. ಆದರೆ, ಇದನ್ನು ಸಹಿಸದ ವಿರೋಧ ಪಕ್ಷಗಳು ಅಪಪ್ರಚಾರದಲ್ಲಿ ನಿರತವಾಗಿವೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಆಡಳಿತ ಪಕ್ಷದ ಸದಸ್ಯರು ಅವರಿಗೆ ಬೆಂಬಲವಾಗಿ ನಿಂತರು. ಯುಪಿಎ ಸರ್ಕಾರ ಡಾ. ಸ್ವಾಮಿನಾಥನ್ ಸಮಿತಿಯ ಶಿಫಾರಸುಗಳನ್ನು ಶೀಥಲ ಗೃಹದಲ್ಲಿಟ್ಟಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರ ರೈತರ ಉತ್ಪನ್ನಗಳಿಗೆ ಹೆಚ್ಚಿನ ಬೆಂಬಲ ಬೆಲೆ ದೊರಕಿಸಲು ಈಗಾಗಲೇ ಉಪಕ್ರಮಗಳನ್ನು ಕೈಗೊಂಡಿದೆ. ಇದರ ಪರಿಣಾಮ ದೇಶ ನಿಜವಾದ ಅರ್ಥದಲ್ಲಿ ವಿಕಸಿತ ಭಾರತದ ಕಡೆಗೆ ಸಾಗುತ್ತಿದೆ ಎಂದು ಹೇಳಿದರು.

ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಚರ್ಚೆಯ ಮೇಲೆ ಮಾತನಾಡಿ, ದೇಶದಲ್ಲಿ ನಿರುದ್ಯೋಗ ಪ್ರಮಾಣ ಹೆಚ್ಚಾಗುತ್ತಿದೆ. ಜನ ಬಳಕೆಯ ಅವಶ್ಯಕ ವಸ್ತುಗಳು ಗಗನಕ್ಕೆ ಏರುತ್ತಿವೆ.

ಡಾಲರ್ ವಿರುದ್ಧ ರೂಪಾಯಿ ಮೌಲ್ಯ ದಿನೇ ದಿನೇ ಕೆಳಮಟ್ಟಕ್ಕೆ ಇಳಿಯುತ್ತಿದೆ. ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಸರ್ಕಾರ ನೀಡಿದ್ದ ಭರವಸೆಯನ್ನು ಈಡೇರಿಸಿಲ್ಲ ಎಂದು ಅಸಮಾಧಾನ ಹೊರ ಹಾಕಿದರು.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಬಹಳಷ್ಟು ಸಂಖ್ಯೆಯ ಹುದ್ದೆಗಳು ಖಾಲಿ ಇದ್ದರೂ ಅವುಗಳ ನೇಮಕಾತಿಗೆ ಸರ್ಕಾರ ಗಮನ ಹರಿಸಿಲ್ಲ. ದೇಶದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರ ಮೇಲೆ ದೌರ್ಜನ್ಯ, ದಬ್ಬಾಳಿಕೆ ಹೆಚ್ಚಾಗುತ್ತಿದೆ. ಇದರ ನಿಯಂತ್ರಣಕ್ಕೂ ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲ. ದೇಶದಲ್ಲಿ ಜಾತಿ ಗಣತಿಯನ್ನು ಕೂಡಲೇ ಕೈಗೆತ್ತಿಕೊಳ್ಳಬೇಕು ಎಂದು ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಆಡಳಿತ ಮತ್ತು ವಿರೋಧಿ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು. ಕೇಂದ್ರ ಸಚಿವ ಪಿಯೂಶ್ ಗೋಯಲ್ ಮಧ್ಯ ಪ್ರವೇಶಿಸಿ, ಎನ್‌ಡಿಎ ಅವಧಿಗಿಂತ ೧೦ ವರ್ಷಗಳ ಯುಪಿಎ ಆಡಳಿತ ಸರ್ಕಾರ ಅವಧಿಯಲ್ಲಿ ಶೇಕಡ ೫೭ರಷ್ಟು ಹೆಚ್ಚು ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿತ್ತು ಎಂಬುದನ್ನು ಅಂಕಿ-ಅಂಶಗಳೆ ಸಾರಿ ಹೇಳುತ್ತವೆ.

ಮಹಾಕುಂಭ ಮೇಳದ ಬಗ್ಗೆಯೂ ಮಲ್ಲಿಕಾರ್ಜುನ ಖರ್ಗೆ ಅವರು ಸಲ್ಲದ ರೀತಿಯಲ್ಲೇ ಟೀಕೆ ಮಾಡಿದ್ದಾರೆ ಎಂದು ಹೇಳಿದರು.

****************

ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಯೋಜನೆಗೆ ದೇಶಾದ್ಯಂತ ಆರು ಲಕ್ಷಕ್ಕೂ ಹೆಚ್ಚು ಅರ್ಜಿಗಳು ಬಂದಿವೆ ಎಂದು ಸರ್ಕಾರ ಲೋಕಸಭೆಗಿಂದು ತಿಳಿಸಿದೆ.

ಲೋಕಸಭೆಯಲ್ಲಿ ಲಿಖಿತ ಉತ್ತರ ನೀಡಿದ ಕಾರ್ಪೋರೇಟ್ ವ್ಯವಹಾರಗಳ ರಾಜ್ಯ ಸಚಿವ ಹರ್ಷ್ ಮಲ್ಹೋತ್ರಾ, ಅಕ್ಟೋಬರ್ ೩, ೨೦೨೪ ರಂದು ಪ್ರಾರಂಭವಾದಾಗಿನಿಂದ ಪೈಲಟ್ ಯೋಜನೆಯಡಿಯಲ್ಲಿ ಪಾಲುದಾರ ಕಂಪನಿಗಳು ಇಲ್ಲಿಯವರೆಗೆ ೧ ಲಕ್ಷ ೨೭ ಸಾವಿರಕ್ಕೂ ಹೆಚ್ಚು

ಇಂಟರ್ನ್‌ಶಿಪ್‌ಗಳನ್ನು ಒದಗಿಸಿರುವುದರಿಂದ ಯೋಜನೆಗೆ ಅಗಾಧ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಹೇಳಿದರು.

ಮೊದಲ ಹಂತದಲ್ಲಿ, ಪಾಲುದಾರ ಕಂಪನಿಗಳು ೮೦ ಸಾವಿರಕ್ಕೂ ಹೆಚ್ಚು ಇಂಟರ್ನ್‌ಶಿಪ್ ಕೊಡುಗೆಗಳನ್ನು ನೀಡಿವೆ, ಅವುಗಳಲ್ಲಿ ೨೮ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ಈ ಕೊಡುಗೆಯನ್ನು ಸ್ವೀಕರಿಸಿದ್ದಾರೆ. ಯೋಜನೆಯ ಎರಡನೇ ಹಂತ ಈ ವರ್ಷ ಜನವರಿ ೯ ರಂದು ಪ್ರಾರಂಭವಾಗಿದ್ದು, ಕಂಪನಿಗಳು ಹೊಸ ಮತ್ತು ಬಾಕಿ ಇರುವ ಇಂಟರ್ನ್‌ಶಿಪ್‌ಗೆ ಆಯ್ಕೆ ಮಾಡುವ ಪ್ರಕ್ರಿಯೆಯಲ್ಲಿ ತೊಡಗಿವೆ ಎಂದು ಸದನಕ್ಕೆ ಮಾಹಿತಿ ನೀಡಿದರು.

***************

ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ದೆಹಲಿಯ ಆಪ್ ಸರ್ಕಾರ ೯ನೇ ತರಗತಿಗಿಂತ ಹೆಚ್ಚು ಕಾಲ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದನ್ನು ಖಾತರಿಪಡಿಸದ ಹೊರತು ಅವರನ್ನು ಮುಂದಿನ ತರಗತಿಗೆ ಹೋಗದಂತೆ ತಡೆಯುತ್ತಿದೆ. ಆದರೆ, ನಿಜವಾದ ಸತ್ಯವನ್ನು ಸರ್ಕಾರ ಅರ್ಥಮಾಡಿಕೊಳ್ಳುತ್ತಿಲ್ಲ.

ವಿದ್ಯಾರ್ಥಿಯ ಫಲಿತಾಂಶ ಕಳಪೆಯಾಗಿದ್ದರೆ, ಅದು ಸರ್ಕಾರದಲ್ಲಿನ ಲೋಪದ ಒಂದು ಭಾಗ ಎಂಬ ಸತ್ಯವನ್ನು ದೆಹಲಿ ಸರ್ಕಾರ ಮನನ ಮಾಡಿಕೊಳ್ಳುತ್ತಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

***************

ವಿಕಸಿತ ಭಾರತ ದೃಷ್ಟಿಕೋನವನ್ನು ಮತ್ತು ಸಮಗ್ರ ಗುರಿಯನ್ನು ಸಾಧಿಸುವ ಇಚ್ಛಾ ಶಕ್ತಿಯನ್ನು ಕೇಂದ್ರ ಬಜೆಟ್ ಒಳಗೊಂಡಿದೆ ಎಂದು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಡಿಶಾದ ದೃಷ್ಟಿಕೋನವನ್ನು ಅದು ಹೇಗೆ ಉತ್ತೇಜಿಸುತ್ತದೆ ಎಂಬುದರ ಕುರಿತು ಮಾತನಾಡಿದ ಅವರು, ಒಡಿಶಾ ಇಲ್ಲದೆ ವಿಕಸಿತ ಭಾರತ ಸಾಧ್ಯವಿಲ್ಲ ಎಂದರು.

ಒಡಿಶಾದ ಮಧ್ಯಮ ವರ್ಗದ ಜನರು ಪ್ರೋತ್ಸಾಹಕ ಕ್ರಮಗಳಿಂದ ಒಡಿಶಾದ ಸ್ಟಾರ್ಟ್ ಅಪ್‌ಗಳು ಮತ್ತು ಕೈಗಾರಿಕೋದ್ಯಮಿಗಳು ಸಹ ಪ್ರಯೋಜನ ಪಡೆಯಲಿದ್ದಾರೆ ಎಂದು ಹೇಳಿದರು.

****************

ಐದು ವರ್ಷಗಳ ಹಿಂದೆ ದಾಖಲಿಸಿದ್ದ ಅಂದಾಜು ನಿರುದ್ಯೋಗದ ಪ್ರಮಾಣ ಶೇಕಡ ೬ ರಿಂದ ಕಳೆದ ಹಣಕಾಸು ವರ್ಷದಲ್ಲಿ ಶೇಕಡ ೩.೨ಕ್ಕೆ ಇಳಿದಿದೆ ಎಂದು ಸರ್ಕಾರ ಲೋಕಸಭೆಗೆ ತಿಳಿಸಿದೆ.

ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಸದನಕ್ಕೆ ನೀಡಿದ ಉತ್ತರದಲ್ಲಿ ಈ ವಿಷಯ ತಿಳಿಸಿದ್ದಾರೆ. ಇತ್ತೀಚಿನ ಆವರ್ತಕ ಕಾರ್ಮಿಕ ಪಡೆ ಸಮೀಕ್ಷೆ, ಪಿಎಲ್ಎಫ್ಎಸ್ ೧೫ ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರಲ್ಲಿ ನಿರುದ್ಯೋಗ ದರ ಕಡಿಮೆಯಾಗಿದೆ ಎಂಬುದನ್ನು ಸಮೀಕ್ಷಾ ವರದಿಯಲ್ಲಿ ಉಲ್ಲೇಖಿಸಿರುವುದನ್ನು ಸಚಿವರು ಒತ್ತಿ ಹೇಳಿದ್ದಾರೆ.

ಉದ್ಯೋಗಾವಕಾಶವನ್ನು ಹೆಚ್ಚಿಸಲು ಸರ್ಕಾರ ಹಲವಾರು ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದು ಹೇಳಿದ ಸಚಿವರು, ಮುಂದಿನ ಐದು ವರ್ಷಗಳಲ್ಲಿ ೪ ಕೋಟಿಗೂ ಹೆಚ್ಚು ಯುವಕರಿಗೆ ಉದ್ಯೋಗ, ಕೌಶಲ್ಯ ಮತ್ತು ಅವಕಾಶಗಳನ್ನು ಸುಗಮಗೊಳಿಸಲು ಪ್ರಧಾನಮಂತ್ರಿಯವರ ಪ್ಯಾಕೇಜ್ ಅಡಿಯಲ್ಲಿ ೫ ಯೋಜನೆಗಳನ್ನು ಪ್ರಸಕ್ತ ಹಣಕಾಸು ವರ್ಷದಲ್ಲಿ ಘೋಷಿಸಲಾಗಿದೆ ಎಂದು ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

****************

ಕಳೆದ ವರ್ಷ ಡಿಸೆಂಬರ್‌ನಲ್ಲಿ ತಾವು ಅಮೆರಿಕಕ್ಕೆ ನೀಡಿದ್ದ ಭೇಟಿಯ ಬಗ್ಗೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಉದ್ದೇಶಪೂರ್ವಕ ಅಪಪ್ರಚಾರದಲ್ಲಿ ನಿರತರಾಗಿದ್ದಾರೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಆರೋಪಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್, ಕಳೆದ ವರ್ಷ ತಾವು ಬೈಡನ್ ಆಡಳಿತದ ವಿದೇಶಾಂಗ ಕಾರ್ಯದರ್ಶಿ ಅವರನ್ನು ಭೇಟಿ ಮಾಡಲು ಹೋಗಿದ್ದೆ, ಅವರು ಭಾರತೀಯ ಕಾನ್ಸುಲ್ ಜನರಲ್‌ಗಳ ಸಭೆಯ ಅಧ್ಯಕ್ಷತೆ ವಹಿಸಿದ್ದರು ಮತ್ತು ಮುಂಬರುವ ಎನ್ಎಸ್ಎ-ನಿಯೋಜಿತರನ್ನು ಭೇಟಿಯಾಗಿದ್ದರು. ಪ್ರಧಾನಿ ಆಹ್ವಾನ ಕುರಿತು ಯಾವುದೇ ಹಂತದಲ್ಲೂ ಚರ್ಚಿಸಲಾಗಿಲ್ಲ ಎಂದು ವಿದೇಶಾಂಗ ಸಚಿವರು ಸ್ಪಷ್ಟಪಡಿಸಿದ್ದಾರೆ.

***************

೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ, ಕರ್ನಾಟಕದ ೧೫ ವರ್ಷದ ಜೊನಾಥನ್ ಗವಿನ್ ಆಂಟೋನಿ ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಮುಡಿಗೇರಿಕೊಂಡಿದ್ದಾರೆ.

ಹಿರಿಯ ರಾಷ್ಟ್ರೀಯ ಆಟಗಾರರನ್ನು ಹಿಂದೆ ತಳ್ಳಿದ ಆಂಟನಿ ೨೪೦.೭ ಅಂಕ ಗಳಿಸಿದರೆ, ಸರ್ವಿಸಸ್‌ನ ರವೀಂದರ್ ಸಿಂಗ್ ೨೪೦.೩ ಅಂಕಗಳೊಂದಿಗೆ ಬೆಳ್ಳಿ ಪದಕಕ್ಕೆ ಭಾಜನರಾದರೆ, ಮತ್ತೊಬ್ಬ ಸರ್ವಿಸಸ್ ಶೂಟರ್ ಗುರುಪ್ರೀತ್ ಸಿಂಗ್ ೨೨೦.೧ ಅಂಕಗಳೊಂದಿಗೆ ಕಂಚಿನ ಪದಕ ಪಡೆದರು. ಹರಿಯಾಣವನ್ನು ಪ್ರತಿನಿಧಿಸುವ ಒಲಿಂಪಿಕ್ ಪದಕ ವಿಜೇತ ಸರಬ್ಜೋತ್ ಸಿಂಗ್ ೪ನೇ ಸ್ಥಾನದಲ್ಲಿದ್ದಾರೆ.

ಪ್ರಸ್ತುತ, ಸರ್ವಿಸಸ್ ೧೭ ಚಿನ್ನ, ೧೦ ಬೆಳ್ಳಿ ಮತ್ತು ೮ ಕಂಚಿನ ಪದಕಗಳೊಂದಿಗೆ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದರೆ, ಕರ್ನಾಟಕ ೧೭ ಚಿನ್ನ, ೬ ಬೆಳ್ಳಿ ಮತ್ತು ೬ ಕಂಚಿನ ಪದಕಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಮಹಾರಾಷ್ಟ್ರ ೧೩ ಚಿನ್ನ, ೨೩ ಬೆಳ್ಳಿ ಮತ್ತು ೧೯ ಕಂಚಿನ ಪದಕಗಳೊಂದಿಗೆ ಮೂರನೇ ಸ್ಥಾನದಲ್ಲಿದೆ.

*********ಮುಕ್ತಾಯ*******